ಶ್ರೀ ಮಲ್ಲಿಕಾರ್ಜುನ ಖರ್ಗೆ: ಗಲಾಟೆ ಮಾಡುವುದು ನಮ್ಮ ಇಚ್ಛೆಯಲ್ಲ, ನಿಮ್ಮ ರೂಲಿಂಗ್ ಅನ್ನು ರಿವ್ಯೂ ಮಾಡಲು ಮನವರಿಕೆ ಮಾಡಿಕೊಡುವ ಪ್ರಯತ್ನ ಮಾಡುತ್ತಿದ್ದೇವೆ. . .

(ಗೊಂದಲ)

ಅಧ್ಯಕ್ಷರು: ಮಾನ್ಯ ಖರ್ಗೆಯವರೆ, ಮಾತನಾಡುವುದೇನಾದರೂ ಇದ್ದಲ್ಲಿ ಅವರವರ ಸ್ಥಾನಕ್ಕೆ ಹೋಗಿ ಮಾತನಾಡಲಿ, ಇಲ್ಲಿ ನಿಂತು ಮಾತನಾಡಲು ಅವಕಾಶವಿಲ್ಲ . . . . .

(ಗೊಂದಲ)

ಶ್ರೀ ಕೆ.ಎಸ್. ಈಶ್ವರಪ್ಪ: ತಮ್ಮ ಬಗ್ಗೆ ಇವರಿಗೆ ಗೌರವವಿಲ್ಲ, ಮಾನ್ಯ ರಾಜ್ಯಪಾಲರ ಬಗ್ಗೆ ಗೌರವವಿಲ್ಲ . . . . . .

(ಗೊಂದಲ)

ಅಧ್ಯಕ್ಷರು: ಈಗ ಸದನವನ್ನು 15 ನಿಮಿಷಗಳ ಕಾಲ ಮೂಂದೂಡಲಾಗಿದೆ.

(ಸದನವು ಬೆಳಿಗ್ಗೆ 11 ಗಂಟೆ 47 ನಿಮಿಷಕ್ಕೆ ಮುಂದೂಡಲ್ಪಟ್ಟು 15 ನಿಮಿಷಗಳ ನಂತರ ಸೇರಲು ನಿಶ್ಚಯಿಸಿತು.)

(ಸದನವು ಪುನಃ ಮಧ್ಯಾಹ್ನ 1 ಗಂಟೆ 30 ನಿಮಿಷಕ್ಕೆ ಸಮಾವೇಶಗೊಂಡಿತು)

(ಮಾನ್ಯ ಅಧ್ಯಕ್ಷರು (ಶ್ರೀ ಕೃಷ್ಣರವರು) ಅಧ್ಯಕ್ಷ ಪೀಠವನ್ನು ಅಲಂಕರಿಸಿದರು)

ಅಧ್ಯಕ್ಷರು: ಈಗ ಸದನವನ್ನು ಸಂಜೆ 4 ಗಂಟೆಯವರೆಗೆ ಮುಂದೂಡಲಾಗಿದೆ.

(ಸದನವು ಮಧ್ಯಾಹ್ನ 1 ಗಂಟೆ 31 ನಿಮಿಷಕ್ಕೆ ಮುಂದೂಡಲ್ಪಟ್ಟು ಪುನಃ ಸಂಜೆ 4 ಗಂಟೆಗೆ ಸೇರಲು ನಿಶ್ಚಯಿಸಿತು)

(ಸದನವು ಸಂಜೆ 5-00 ಗಂಟೆಗೆ ಸಮಾವೇಶಗೊಂಡಿತು)

(ಮಾನ್ಯ ಅಧ್ಯಕ್ಷರು (ಶ್ರೀ ಕೃಷ್ಣರವರು) ಅಧ್ಯಕ್ಷ ಪೀಠವನ್ನು ಅಲಂಕರಿಸಿದರು)

2) ಪ್ರಕಟಣೆ

ವಿಷಯ: ಘನತೆವೆತ್ತ ರಾಜ್ಯಪಾಲರಿಂದ ವಿಧಾನಸಭಾ ಸದಸ್ಯರಿಗೆ ಚಹಾ ಕೂಟದ ಏರ್ಪಾಡು.

ಅಧ್ಯಕ್ಷರು: ಇಂದು ಸಂಜೆ 5-30 ಗಂಟೆಗೆ ಘನತೆವೆತ್ತ ರಾಜ್ಯಪಾಲರು ರಾಜಭವನದಲ್ಲಿ ಎಲ್ಲಾ ವಿಧಾನಸಭಾ ಸದಸ್ಯರಿಗೂ ಚಹ ಕೂಟವನ್ನು ಏರ್ಪಾಡು ಮಾಡಿದ್ದಾರೆ. ಈ ಸಂಬಂಧವಾಗಿ ಈಗಾಗಲೇ ತಮಗೆಲ್ಲರಿಗೂ ಆಮಂತ್ರಣ ಪತ್ರವನ್ನು ಸಹ ಕಳುಹಿಸಲಾಗಿದೆ. ಆದ್ದರಿಂದ ತಾವುಗಳು ದಯಮಾಡಿ ಚಹಾ ಕೂಟದಲ್ಲಿ ಭಾಗವಹಿಸಬೇಕೆಂದು ಕೋರುತ್ತೇನೆ. ಈಗ ಸದನವನ್ನು ನಾಳೆ ಬೆಳಿಗ್ಗೆ 11-00 ಗಂಟೆಯವರೆಗೆ ಮುಂದೂಡುತ್ತಿದ್ದೇನೆ.

(ಸದನವು ಸಂಜೆ 5-00 ಗಂಟೆ 2 ನಿಮಿಷಕ್ಕೆ ಮುಂದೂಡಲ್ಪಟ್ಟು ಪುನಃ ದಿನಾಂಕ 01-03-2006ರ ಬುಧವಾರ ಬೆಳಿಗ್ಗೆ 11-00 ಗಂಟೆಗೆ ಸೇರಲು ನಿಶ್ಚಯಿಸಿತು.)

* * * * *